ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಚೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾಕಹೊ/15/2016-17. ದಿನಾಂಕ:04-07-2016.

| ವಾದಿಗಳು | ಪ್ರತಿವಾದಿಗಳು |
| --- | --- |
| ಬಸಮ್ಮ ತಂದೆ ಲೇಟ್ ಮಾರಪ್ಪ<br>ಐಗಳಮಲ್ಲಾಪುರ ಗ್ರಾಮ<br>ಕೂಡ್ಲಿಗಿ ತಾಲೂಕು | ಹರಿಜನ ಸಣ್ಣ ಮಾರಪ್ಪ ತಂದೆ ಲೇಟ್ ಬಸಪ್ಪ.<br>ಮೂಸ್ಡೂರು ಗ್ರಾಮ<br>ಜಗಳೂರು ತಾಲೂಕು<br>ದಾವಣಗೆರೆ ಜಿಲ್ಲಾ<br>ಕೇರ್ ಆಫ್ ಅಡ್ರಾಸ್<br>ಐಗಳಮಲ್ಲಾಪುರ ಗ್ರಾಮ<br>ಕೂಡ್ಲಿಗಿ ತಾಲೂಕು |

ಕೂಡ್ಲಿಗಿ ತಾಲೂಕು ಚೌಡಾಪುರ ಗ್ರಾಮದ ಸನಂ 188ಎ. 331. 343. ವಿಸ್ತೀರ್ಣ 3-95. 0-94. 8-90. ಎಕ್ರೆ ಜಮೀನುಗಳನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ.

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಚೌಡಾಪುರ ಗ್ರಾಮದ ಸನಂ 188ಎ. 331. 343. ವಿಸ್ತೀರ್ಣ 3-95. 0-94. 8-90. ಎಕ್ರೆ ಜಮೀನುಗಳನ್ನು ಸದರಿ ತಾಲೂಕು ಐಗಳಮಲ್ಲಾಪುರ ಗ್ರಾಮದ ಬಸಮ್ಮ ತಂದೆ ಲೇಟ್ ಮಾರಪ್ಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಚೌಡಾಪುರ ಇವರು ನಮೂನೆ-21 ನೋಟಿಸನ್ನು ದಿನಾಂಕ 23-02-2016. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಜಗಳೂರು ತಾಲೂಕು ಮೂಸ್ಡೂರು ಗ್ರಾಮದ ಹರಿಜನ ಸಣ್ಣ ಮಾರಪ್ಪ ತಂದೆ ಬಸಪ್ಪ ಇವರು ತಕರಾರು ಅರ್ಜಿ ಸಲ್ಲಿಸಿರುವ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 13/2015-16. ದಿನಾಂಕ 24-03-2016. ರಲ್ಲಿ ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 04-07-2016 ರಂದು ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಗೈರು ಹಾಜರಾಗಿರುತ್ತಾರೆ. ತಕರಾರುದಾರರ ಪರ ನ್ಯಾಯಾವಾದಿಗಳು ಹಾಜರಾಗಿರುತ್ತಾರೆ. ಅರ್ಜಿದಾರರು ಚೌಡಾಪುರ ಗ್ರಾಮದ ಸನಂ 188ಎ. 331. 343. ವಿಸ್ತೀರ್ಣ 3-95. 0-94. 8-90. ಎಕ್ರೆ ಜಮೀನುಗಳು ನಮ್ಮ ತಂದೆಯವರಾದ ಹರಿಜನ ಮಾರಪ್ಪ ತಂದೆ ಬಸಪ್ಪ ಇವರ ಹೆಸರಲ್ಲಿ ಜಂಟಿ ಪಟ್ಟಾ ಲೆಕ್ಕ ದಾಖಲೆ ಇದ್ದು ಸದರಿಯವರು ನಿಧನ ಹೊಂದಿರುವ ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಮಾತ್ರ ಸಲ್ಲಿಸಿದ್ದು ವಿಚಾರಣೆಗೆ ಗೈರು ಹಾಜರಾಗಿರುತ್ತಾರೆ.

ವಿಚಾರಣೆಯಲ್ಲಿ ತಕರಾರುದಾರರ ಪರ ನ್ಯಾಯಾವಾದಿಗಳು ಹಾಜರಾಗಿದ್ದು ಸದರಿ ವಿವಾದಿತ ಜಮೀನುಗಳ ಪಹಣಿಯಲ್ಲಿ ಎಲ್ಲಾ ಖಾತೆದಾರರ ಒಪ್ಪಿಗೆ ಪಡೆಯದೇ ಪೋತಿವಿರಾಸತ್ ಹಕ್ಕು ಬದಲಾವಣೆ ಕೋರಿ ಅರ್ಜಿ ಸಲ್ಲಿಸಿರುವುದು ಆಕ್ಷೇಪಣಾರ್ಹವೆಂದು ಅದರಲ್ಲಿ ಪ್ರತಿವಾದಿಯಾದ ಸಣ್ಣ ಮಾರಪ್ಪ ತಂದೆ ಲೇಟ್ ಬಸಪ್ಪ. ಇವರು ಜೀವಂತವಿರುವಾಗ ಈ ರೀತಿ ಮಾಡುವುದು ಕಾನೂನು ಬಾಹಿರವಾಗಿರುತ್ತದೆಯೇಂದು ಅರಕೆ ಮಾಡಿ ಕೊಂಡಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನುಗಳ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರು ವಿಚಾರಣೆಗೆ ಗೈರು ಹಾಜರಾಗಿದ್ದು ಹಾಗೂ ತಕರಾರುದಾರರ ಪರ ನ್ಯಾಯಾವಾದಿಗಳ ಹೇಳಿಕೆಗಳನ್ನು ಕೇಳಿ ಪಹಣಿಯಲ್ಲಿನ ಎಲ್ಲಾ ಖಾತೆದಾರರ ಒಪ್ಪಿಗೆ ಪಡೆಯದೆ ಪೋತಿವಿರಾಸತ್ ಹಕ್ಕು ಬದಲಾವಣೆಗೆ ಅರ್ಜಿ ಸಲ್ಲಿಸಿರುವುದು ಕಂಡು ಬಂದ ಕಾರಣ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸುತ್ತಾ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಚೌಡಾಪುರ ಗ್ರಾಮದ ಸನಂ 188ಎ. 331. 343. ವಿಸ್ತೀರ್ಣ 3-95. 0-94. 8-90. ಎಕ್ರೆ ಜಮೀನುಗಳ ಪಹಣಿಯಲ್ಲಿನ ಎಲ್ಲಾ ಖಾತೆದಾರರ ಒಪ್ಪಿಗೆ ಪಡೆಯದೆ ಪೋತಿವಿರಾಸತ್ ಅರ್ಜಿ ಸಲ್ಲಿಸಿರುವುದರಿಂದ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸುತ್ತಾ ಯಥಾಸ್ಥಿತಿಯಂತೆ ಮುಂದುವರಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 04-07-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಹೊಸಹಳ್ಳಿ
[illegible]

ಇದರ ಪ್ರತಿಯನ್ನು:

1) ಅರ್ಜಿದಾರರಾದ ಬಸಮ್ಮ ತಂದೆ ಲೇಟ್ ಮಾರಪ್ಪ ಐಗಳಮಲ್ಲಾಪುರ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ತಕರಾರುದಾರರಾದ ಹರಿಜನ ಸಣ್ಣ ಮಾರಪ್ಪ ತಂದೆ ಲೇಟ್ ಬಸಪ್ಪ ಮೂಸ್ಗೂರು ಗ್ರಾಮ ಜಗಳೂರು ತಾಲೂಕು ಇವರ ಪರ ವಕೀಲರಾದ ಆರ್.ರಮೇಶ ವಕೀಲರು ಕೂಡ್ಲಿಗಿ ಇವರ ದ್ವಾರ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.